# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1069 (1132) |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ. ಜಿ. ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 07/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೂಲಿ ಕಾರ್ಮಿಕರು ಮತ್ತು ಬಡವರು ಜಿಲ್ಲೆಗಳಿಂದ ವಲಸೆ ಹೋಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು. |
| ಆ) | ಬಂದಿದಲ್ಲಿ, ಕೂಲಿ ಕಾರ್ಮಿಕರು ಮತ್ತು ಬಡವರು ವಲಸೆ ಹೋಗುವುದನ್ನು ತಡೆಗಟ್ಟಲು ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು) | **ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ**<br>ಈಗಾಗಲೇ ಕರ್ನಾಟಕ ರಾಜ್ಯದಾದ್ಯಂತ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಗಳ ಮೂಲಕ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ರಾಜ್ಯದ ಯುವ ಜನತೆಗೆ ಕೌಶಲ್ಯತೆಯೊಂದಿಗೆ ಉದ್ಯಮಶೀಲನ್ನಾಗಿಸುವ ಮಹತ್ವಕಾಂಕ್ಷೆಯನ್ನು ಹೊಂದಿದ್ದು, ತರಬೇತುದಾರ ಸಂಸ್ಥೆಗಳಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳ ಪೈಕಿ ಶೇ 70 ರಷ್ಟು ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಷರತ್ತನ್ನು ವಿಧಿಸಲಾಗಿದೆ ಹಾಗೂ ಪ್ರಾದೇಶಿಕ, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉದ್ಯೋಗ ಮೇಳಗಳ ಮೂಲಕ ಮತ್ತು ವರ್ಚುಯಲ್ ಉದ್ಯೋಗ ಮೇಳಗಳ ಮೂಲಕ ರಾಜ್ಯದ ಯುವ ಜನತೆಗೆ ಉದ್ಯೋಗಾವಕಾಶ ಒದಗಿಸುವ ಕ್ರಮವನ್ನು ಕೈಗೊಂಡಿದೆ. |

| | | |
|---|---|---|
| | | ಕಾರ್ಮಿಕರಿಗೆ ಪ್ರತ್ಯೇಕವಾಗಿ Recognition of Prior Learning (RPL) - ಪೂರ್ವ ಕಲಿಕೆ ಗುರುತಿಸುವಿಕೆಯಡಿ ತರಬೇತಿಯನ್ನು ನೀಡಿ ಪ್ರಮಾಣ ಪತ್ರ ನೀಡಲಾಗುತ್ತಿದೆ. ಮುಂದುವರೆದು ಕೋವಿಡ್ – 19 ರ ಸಾಂಕ್ರಾಮಿಕ ಬಿಕ್ಕಟಿನ ಸಮಯದಲ್ಲಿ 150 ವಲಸೆ ಕಾರ್ಮಿಕರಿಗೆ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, Domestic Data Entry Operator ಜಾಬ್‌ರೋಲ್ ನಡಿ ಹಾಗೂ Field Technician and Computer Peripherals ಜಾಬ್‌ರೋಲ್ ನಡಿ ತರಬೇತಿ ನೀಡಲಾಗಿದೆ.<br><br>**<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ (NRLM)</u>**<br><br>ಸಂಜೀವಿನಿ–ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯು ಕೂಲಿ ಕಾರ್ಮಿಕರು ಮತ್ತು ಬಡವರು ವಲಸೆ ಹೋಗುವುದನ್ನು ತಡೆಯಲು ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ಸ್ವಸಹಾಯ ಗುಂಪುಗಳನ್ನು ಸಂಜೀವಿನಿ–ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ವ್ಯಾಪ್ತಿಗೆ ತರುವ ಮೂಲಕ ಮಹಿಳೆಯರಿಗೆ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ಸೂಕ್ತ ತರಬೇತಿ ಹಾಗೂ ಹಣಕಾಸು ಸೌಲಭ್ಯಗಳನ್ನು ಒದಗಿಸುವ ಮೂಲಕ ಅವರ ಹಾಗೂ ಅವರ ಕುಟುಂಬದ ಆರ್ಥಿಕ ಉತ್ತೇಜನಕ್ಕೆ ಕ್ರಮ ಕೈಗೊಳ್ಳಲಾಗಿದೆ.<br><br>ಪ್ರಮುಖವಾಗಿ ಗ್ರಾಮೀಣ ಮಹಿಳಾ ನಿರುದ್ಯೋಗಿಗಳಿಗೆ ಉದ್ಯೋಗವನ್ನು ಕಲ್ಪಿಸುವ ಉದ್ದೇಶದಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ, ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ ಹಾಗೂ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಕೇಂದ್ರ ಮತ್ತು ಉನ್ನತಿ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಮುಖವಾಗಿ, ಸ್ವಸಹಾಯ ಗುಂಪುಗಳ ಸದಸ್ಯರುಗಳಿಗೆ ಭಾರತ ಸರ್ಕಾರದ ಮಾರ್ಗಸೂಚಿಗಳಂತೆ ನಿರುದ್ಯೋಗ ಸಮಸ್ಯೆಯಿಂದ ಹೊರಬರಲು ಹಾಗೂ ಕುಟುಂಬದ ಆರ್ಥಿಕ ಪ್ರಗತಿಗಾಗಿ ಜೀವನೋಪಾಯ ಉದ್ಯೋಗಗಳನ್ನು ಕೈಗೊಳ್ಳಲು ಸಮುದಾಯ ಬಂಡವಾಳ ನಿಧಿ, ಸುತ್ತು ನಿಧಿ, ಬ್ಯಾಂಕ್ ಲಿಂಕೇಜ್ ಸೌಲಭ್ಯಗಳನ್ನು ಒದಗಿಸಲಾಗಿದೆ. ಹಣಕಾಸು ಸೇರ್ಪಡೆ, ಕೃಷಿ ಮತ್ತು ಕೃಷಿಯೇತರ ಚಟುವಟಿಕೆಗಳನ್ನು ಕೈಗೊಳ್ಳಲು ಅನುಕೂಲವಾಗುವಂತೆ ಸೂಕ್ತ ತರಬೇತಿಗಳನ್ನು ಏರ್ಪಡಿಸಿ ನರೇಗಾ ಯೋಜನೆ ಸೇರಿದಂತೆ ಇತರೆ ಇಲಾಖೆಗಳಡಿ ದೊರೆಯುವ ಸೌಲಭ್ಯಗಳನ್ನು ಒಗ್ಗೂಡಿಸುವಿಕೆ ವೇದಿಕೆಯಡಿ ಅನುಕೂಲ ಮಾಡಿಕೊಡಲಾಗಿದೆ. |

ಮುಂದುವರೆದು, ಸ್ವಸಹಾಯ ಗುಂಪಿನ ಸದಸ್ಯರು ಉತ್ಪಾದಿಸುತ್ತಿರುವ ಉತ್ಪನ್ನಗಳಿಗೆ ಮಾಸಿಕ ಸಂತೆ, ಸರಸ್ ಮೇಳದಲ್ಲಿ ಭಾಗವಹಿಸಲು ಅನುಕೂಲ ಒದಗಿಸುವ ಮೂಲಕ ಒಂದಕ್ಕಿಂತ ಹೆಚ್ಚಿನ ಜೀವನೋಪಾಯ ಚಟುವಟಿಕೆ ಕೈಗೊಂಡು ನಿರುದ್ಯೋಗ ಹಾಗೂ ಬಡತನ ಸಮಸ್ಯೆಗಳಿಂದ ಮುಕ್ತಗೊಳಿಸಲು ನಿರಂತರ ಕ್ರಮ ಜರುಗಿಸಲಾಗುತ್ತಿದೆ. ಡಿಡಿಯುಜಿಕೆವೈ ಮತ್ತು ಆರ್‌ಸೆಟಿ ಯೋಜನೆಗಳಡಿ ಕೌಶಲ್ಯ ತರಬೇತಿಗಳನ್ನು ಹಮ್ಮಿಕೊಳ್ಳುವುದಷ್ಟೆಯಲ್ಲದೇ ಉದ್ಯೋಗ ಮೇಳಗಳನ್ನು ಹಮ್ಮಿಕೊಂಡು ನಿರುದ್ಯೋಗ ಸಮಸ್ಯೆ ನಿವಾರಿಸಲು ಈ ಕೆಳಕಂಡಂತೆ ಕ್ರಮ ಜರುಗಿಸಲಾಗಿದೆ.

**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ**

(ರೂ. ಲಕ್ಷಗಳಲ್ಲಿ)

| ಜಿಲ್ಲೆ | ಸ್ವಸಹಾಯ ಗುಂಪು | ಸ್ವಸಹಾಯ ಗುಂಪಿನ ಮಹಿಳೆಯರು | ಸಮುದಾಯ ಬಂಡವಾಳ ನಿಧಿ | ಸುತ್ತು ನಿಧಿ | ಸಮುದಾಯ ಪರಿಷ್ಕರಣಾ ನಿಧಿ |
|---|---|---|---|---|---|
| ಕಲಬುರಗಿ | 6641 | 84534 | 1272.00 | 265.18 | 15.00 |
| ಯಾದಗಿರಿ | 2826 | 36686 | 1018.25 | 165.45 | 15.00 |

**ಡಿಡಿಯುಜಿಕೆವೈ ಕಾರ್ಯಕ್ರಮದಡಿ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡಿ ಅವರಲ್ಲಿ ಫಲಾನುಭವಿಗಳಿಗೆ ಉದ್ಯೋಗ ದೊರಕಿಸಿ ಅನುಕೂಲ ಒದಗಿಸಿರುವ ವಿವರ:**

| **ಕ್ರ ಸಂ.** | **ಜಿಲ್ಲೆ** | **ತರಬೇತಿ ಪಡೆದ ಫಲಾನುಭವಿಗಳು** | **ಉದ್ಯೋಗ ಪಡೆದ ಫಲಾನುಭವಿಗಳು** |
|---|---|---|---|
| 1 | ಕಲಬುರಗಿ | 5866 | 3234 |
| 2 | ಯಾದಗಿರಿ | 369 | 289 |

ನಿರುದ್ಯೋಗಿ ಯುವಕ ಯುವತಿಯರಿಗೆ ಉದ್ಯೋಗ ದೊರಕಿಸಲು ದಿನಾಂಕ:21-12-2021 ರಂದು ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿತ್ತು. ರಾಜ್ಯದ ಬೇರೆ ಬೇರೆ ಭಾಗದಿಂದ 18 ಕಂಪನಿಗಳು ಈ ಮೇಳದಲ್ಲಿ ಉದೋಗ ಕೊಡಲು ಮುಂದೆ ಬಂದಿದ್ದು, ಜಿಲ್ಲೆಯ 760 ನಿರುದ್ಯೋಗಿ ಯುವಕ ಯುವತಿಯರು ಉದ್ಯೋಗ ಮೇಳದಲ್ಲಿ ಹೆಸರು ನೊಂದಾಯಿಸಿ ಸಂದರ್ಶನಕ್ಕೆ ಹಾಜರಾಗಿರುತ್ತಾರೆ. ಸದರಿಯವರುಗಳಲ್ಲಿ 107 ಅಭ್ಯರ್ಥಿಗಳಿಗೆ ಉದ್ಯೋಗ ಒದಗಿಸಲಾಗಿದೆ.

ಆರ್‌ಸೆಟಿ ಕಾರ್ಯಕ್ರಮದಡಿ ಫಲಾನುಭವಿಗಳಿಗೆ ಉದ್ಯೋಗಾಧಾರಿತ ತರಬೇತಿ ನೀಡಿ ಫಲಾನುಭವಿಗಳಿಗೆ ಉದ್ಯೋಗ ಕೈಗೊಳ್ಳಲು ಈ ಕೆಳಕಂಡಂತೆ ಅನುಕೂಲ ಕಲ್ಪಿಸಲಾಗಿದೆ.

| ಕ್ರ ಸಂ. | ಜಿಲ್ಲೆ | ತರಬೇತಿ ಪಡೆದ ಫಲಾನುಭವಿಗಳು | ಉದ್ಯೋಗ ಪಡೆದ ಫಲಾನುಭವಿಗಳು |
|---|---|---|---|
| 1 | ಕಲಬುರಗಿ | 8092 | 4506 |
| 2 | ಯಾದಗಿರಿ | 4644 | 2668 |

ಕಾಇ 145 ಎಲ್‌ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು